ವಾಣಿಜ್ಯ ತೆರಿಗೆ	1 52	0 00
ಅಬಕಾರಿ	0 89	0 00
ಸಾರಿಗೆ	0 74	0 00
ನೋಂದಣಿ ಮತ್ತು ಮುದ್ರಾಂಕ	7 26	0 00
ಆರೋಗ್ಯ	12 47	0 00
ಶಿಕ್ಷಣ	17 36	0 00
ಕನ್ನಡ ಮತ್ತು ಸಂಸ್ಕೃತಿ	0 99	0 00
ಸಣ್ಣ ನೀರಾವರಿ	38 13	0 00
ಗ್ರಾಮೀಣಾಭಿವೃದ್ಧಿ	0 00	8 65
ಅರಣ್ಯ	0 00	5 39
ರಸ್ತೆಗಳು	52 76	0 00
ಪ್ರಕೃತಿ ವಿಕೋಪ ಪರಿಹಾರ	240 20	474 88
ಒಟ್ಟು	**471 30**	**594 26**

754 (748) ಶ್ರೀ ಜಯಪ್ರಕಾಶ್ ಹೆಗ್ಡೆ (ಬ್ರಹ್ಮಾವರ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ತಾಲ್ಲೂಕು ಕಛೇರಿಯ ಭೂಮಿ/ಕಿಯಾಸ್ಕ್ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ನಿಲುವೇನು ಮತ್ತು ಈವರೆವಿಗೂ ಸರ್ಕಾರವು ಕೈಗೊಂಡ ಕ್ರಮಗಳೇನು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಇಲ್ಲ

ಆ) ಭೂಮಿ ಕೇಂದ್ರಗಳಲ್ಲಿ ಮಂಜೂರಾದ ಹುದ್ದೆಗಳು ಯಾವುದು ಇಲ್ಲ ಕ್ಷೇತ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವಂತಹ ಗ್ರಾಮ ಲೆಕ್ಕಿಗರನ್ನು ಆಯ್ಕೆ ಮಾಡಿ, ತರಬೇತಿ ನೀಡಿ ಈ ಕೇಂದ್ರಗಳಿಗೆ ನೇಮಿಸಲಾಗುತ್ತಿದೆ

755 (1284) ಶ್ರೀ ಕೃಷ್ಣಮೂರ್ತಿ ಕೆ ಎಂ (ಕಡೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಡೂರು ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 'ಬಗರ್ ಹುಕುಂ' ಸಮಿತಿ ರಚನೆಗೆ ಸರ್ಕಾರ ಇದುವರೆಗೂ ಕೈಗೊಂಡಿರುವ ಕ್ರಮಗಳೇನು ,

ಆ) ''ಆರಾಧನಾ'' ಸಮಿತಿ ರಚನೆಗೆ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿರಲು ಕಾರಣಗಳೇನು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ

ಆ) ರಾಜ್ಯದಲ್ಲಿರುವ 224 ವಿಧಾನ ಸಭಾ ಕ್ಷೇತ್ರದ ಆರಾಧನಾ ಸಮಿತಿ ರಚನೆಗೆ ಸಂಬಂದಿಸಿದಂತೆ ಈಗಾಗಲೇ 105 ಕ್ಷೇತ್ರಗಳಿಗೆ ಸಮಿತಿಗಳನ್ನು ರಚಿಸಲಾಗಿದೆ 69 ಕ್ಷೇತ್ರಗಳಿಗೆ ಸಮಿತಿ ರಚಿಸಲು ಪರಿಶೀಲಿಸಲಾಗುತ್ತಿದೆ ಉಳಿದ 50 ಕ್ಷೇತ್ರಗಳ ಸಮಿತಿ ರಚಿಸಲು ಪ್ರಸ್ತಾವನೆಗಳನ್ನು ನಿರೀಕ್ಷಿಸಲಾಗುತ್ತಿದೆ ಆದಕಾರಣ ಈ ಬಗ್ಗೆ ಸರ್ಕಾರದಿಂದ ಯಾವುದೇ ವಿಳಂಬವಾಗಿಲ್ಲ

757 (1286) ಶ್ರೀ ಕೃಷ್ಣಮೂರ್ತಿ ಕೆ ಎಂ (ಕಡೂರು) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಡೂರು ತಾಲ್ಲೂಕು ಬರಪೀಡಿತ ಪ್ರದೇಶ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಹಾಗಿದ್ದಲ್ಲಿ, ಕಡೂರು ತಾಲ್ಲೂಕಿಗೆ ಬರ ನಿರ್ವಹಣೆಗಾಗಿ ಸರ್ಕಾರ ಬಿಡುಗಡೆ ಮಾಡಿರುವ ಆರ್ಥಿಕ ನೆರವು ಎಷ್ಟು ,

ಇ) ಹಾಗಿದ್ದಲ್ಲಿ, ಇನ್ನು ಮುಂದೆ ಬಿಡುಗಡೆ ಮಾಡಬೇಕಾಗಿರುವ ಆರ್ಥಿಕ ನೆರವು ಎಷ್ಟು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು)

ಅ) ಹೌದು, ಕಡೂರು ತಾಲ್ಲೂಕನ್ನು ಬರಪೀಡಿತವೆಂದು ಘೋಷಿಸಲಾಗಿದೆ

ಆ) ಕಡೂರು ತಾಲ್ಲೂಕಿನಲ್ಲಿ ಬರ ಪರಿಹಾರ ಕೈಗೊಳ್ಳಲು ಒಟ್ಟು ರೂ 100 ಕೋಟಿ ಹಣ ಬಿಡುಗಡೆ ಮಾಡಿದೆ ಹಾಗೂ 1000 ಮೆ ಟನ್ ಆಹಾರಧಾನ್ಯ ಹಾಗೂ ಕುಡಿಯುವ ನೀರು ಸರಬರಾಜಿಗೆ ರೂ 25 00 ಲಕ್ಷ ಹಣ ಜಿಲ್ಲೆಗೆ ಬಿಡುಗಡೆ ಮಾಡಿದೆ

ಇ) ಬರ ಪರಿಸ್ಥಿತಿ ತೀವ್ರತೆಗನುಗುಣವಾಗಿ ಅನುದಾನ ಬಿಡುಗಡೆ ಮಾಡಲಾಗುವುದು

758 (379) ಶ್ರೀ ಕ್ಯಾತಸಂದ್ರ ಎನ್ ರಾಜಣ್ಣ (ಬೆಳ್ಳಾವಿ) ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪರವಾನಗಿ ಪಡೆದು ಸಾರಾಯಿ ಮಾರಾಟ ಮಾಡುತ್ತಿರುವ ಅಂಗಡಿಗಳೆಷ್ಟು , (ಜಿಲ್ಲಾವಾರು ಮಾಹಿತಿ ನೀಡುವುದು) ,

ಆ) ರಾಜ್ಯದಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಸಾರಾಯಿ ಅಂಗಡಿಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಇ) ಹಾಗಿದ್ದಲ್ಲಿ, ಇವುಗಳನ್ನು ತೆರವು ಮಾಡುವ ಬಗ್ಗೆ ಕೈಗೊಂಡಿರುವ ಕ್ರಮಗಳೇನು ?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು)

ಅ) ರಾಜ್ಯದಲ್ಲಿ 15248 ಪರವಾನಗಿ ಪಡೆದ ಸಾರಾಯಿ ಅಂಗಡಿಗಳು ಇರುತ್ತವೆ ಜಿಲ್ಲಾವಾರು ವಿವರಗಳು ಈ ಕೆಳಕಂಡಂತಿವೆ